**ರಾಜ್ಯದ ವಿವಿಧ ಸ್ಥಳಗಳಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಬಗ್ಗೆ**

4378 (5053) : ಶ್ರೀ ಎಂ.ಪಿ. ಅಪ್ಪಚ್ಚು ರಂಜನ್ (ಸೋಮವಾರ ಪೇಟೆ) : ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ನಾಗರೀಕ ವಿಮಾನಯಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಯಾವ ಯಾವ ಸ್ಥಳಗಳಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ಯೋಚಿಸಿದೆ;

ಆ) ಇವುಗಳನ್ನು ಯಾವಾಗ ನಿರ್ಮಿಸಲಾಗುವುದು?

ಇ) ಕೊಡಗು ಜಿಲ್ಲೆಯಲ್ಲಿ ಈ ಪ್ರಸ್ತಾಪ ಸರ್ಕಾರದ ಮುಂದಿದೆಯೆ; ಎಲ್ಲಿ ನಿರ್ಮಿಸಲಾಗುವುದು?

ಈ) ಅಳ್ವಾರದಲ್ಲಿ ಇದಕ್ಕೆ ಈಗ ಮೀಸಲಿಡಲಾಗಿದೆಯೆ; ಎಷ್ಟು ಜಾಗ ಮೀಸಲಿಡಲಾಗಿದೆ;

ಉ) ಯಾವಾಗ ಪ್ರಾರಂಭಿಸಲಾಗುತ್ತದೆ ಮತ್ತು ಇದರ ಯೋಜನೆ ಯಾವ ಹಂತದಲ್ಲಿದೆ ವಿವರ ನೀಡುವುದು?

ಶ್ರೀ ಟಿ. ಜಾನ್ (ಮೂಲಸೌಲಭ್ಯ ಅಭಿವೃದ್ಧಿ ಹಾಗೂ ನಾಗರೀಕ ವಿಮಾನಯಾನ ರಾಜ್ಯ ಸಚಿವರು):

ಅ) ಗುಲ್ಬರ್ಗಾ, ಹಂಪಿ, ಬಿಜಾಪುರ ಮತ್ತು ಶಿವಮೊಗ್ಗ ಇತ್ಯಾದಿಯಂತ ಸ್ಥಳಗಳಲ್ಲಿ ಸರ್ಕಾರವು ಕಾರ್ಯಚರಣೆಯ ಸಣ್ಣ ವಿಮಾನ ನಿಲ್ದಾಣಗಳನ್ನು ನಿರ್ಮಿಸಲು ಪ್ರಸ್ತಾಪಿಸಿದೆ.

ಆ) ಭಾರತೀಯ ವೈಮಾನಿಕ ಪ್ರಾಧಿಕಾರದಿಂದ ಈ ಕೆಳಕಂಡ ಅನುಮೋದನೆ/ಅನುಮತಿ ದೊರೆತನಂತರ ಸದರಿ ವಿಮಾನ ನಿಲ್ದಾಣಗಳ ನಿರ್ಮಾಣವನ್ನು ಕೈಗೆತ್ತಿಕೊಳ್ಳಬೇಕಾಗುತ್ತದೆ.

1) ನಾಗರೀಕ ವಿಮಾನಯಾನ ಮಹಾ ನಿರ್ದೇಶಕರಿಂದ ಅವಶ್ಯವಾದ ಅನುಮತಿ ಇತ್ಯಾದಿ

2) ಭೂ ಸ್ವಾಧೀನವನ್ನು ಸಂಪೂರ್ಣಗೊಳಿಸುವಿಕೆ ಮತ್ತು

3) ಭಾರತೀಯ ವೈಮಾನಿಕ ಪ್ರಾಧಿಕಾರದ ಮಂಡಳಿಯ ಅನುಮೋದನೆ

ಇ) ಕೊಡಗು ಜಿಲ್ಲೆಯಲ್ಲಿ ಸಣ್ಣ ವಿಮಾನ ನಿಲ್ದಾಣವನ್ನು ಸ್ಥಾಪಿಸಲು ಸೂಕ್ತವಾದಂತ ಸ್ಥಳವನ್ನು/ಭೂಮಿಯನ್ನು ಗುರುತಿಸುವಂತೆ ಕೊಡಗು ಜಿಲ್ಲಾಧಿಕಾರಿಗಳನ್ನು ಕೋರಲಾಗಿದೆ.

ಈ) ಅಳ್ವಾರ ಗ್ರಾಮದಲ್ಲಿ ವಿಮಾನ ನಿರ್ಮಿಸಲು ಯಾವ ಭೂಮಿಯನ್ನು ಮೀಸಲಿಟ್ಟಿರುವುದಿಲ್ಲ.

ಉ) ಈ ಮೇಲೆ ವಿವರಿಸಿದಂತೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಅವಶ್ಯವಾದ ಅನುಮತಿ ಪಡೆದನಂತರ ಮತ್ತು ಸೂಕ್ತವಾದ ಸ್ಥಳವನ್ನು ಗುರುತಿಸಿದ ನಂತರ ವಿಮಾನ ನಿಲ್ದಾಣದ ನಿರ್ಮಾಣವನ್ನು ಕೈಗೆತ್ತಿಕೊಳ್ಳಲಾಗುವುದು.

**ಬೆಂಗಳೂರು ನಗರ ಪಾಲಿಕೆಯ ಕಸ ವಿಲೇವಾರಿ ಗುತ್ತಿಗೆ ಪಡೆಯುವಲ್ಲಿ ವಂಚನೆ**

4380 (5062) : ಶ್ರೀ ಆರ್. ಅಶೋಕ್ (ಉತ್ತರಹಳ್ಳಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರ ಪಾಲಿಕೆಯ ಕಸ ವಿಲೇವಾರಿ ಗುತ್ತಿಗೆ ಪಡೆಯುವಲ್ಲಿ ವಂಚನೆ ನಡೆದಿರುವುದು ನಿಜವೇ? (ವಿವರ ನೀಡುವುದು):

ಆ) ಈ ವಿಚಾರ ಸರ್ಕಾರದ ಗಮನಕ್ಕೆ ಬಂದದ್ದು ಯಾವಾಗ?

ಇ) ಈ ವಿಚಾರದಲ್ಲಿ ಈವರೆಗೂ ಯಾವ ಕ್ರಮ ಕೈಗೊಳ್ಳಲಾಗಿದೆ? ಎಷ್ಟು ಜನರನ್ನು ಬಂಧಿಸಲಾಗಿದೆ? (ವಿವರವನ್ನು ನೀಡುವುದು):

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಗಳು):

ಅ) ಇಲ್ಲ.

ಆ)ಇ) ಉದ್ಭವಿಸುವುದಿಲ್ಲ.

**ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾಮಗಾರಿಗೆ ಸಂಬಂಧಪಟ್ಟ ಕಡತಗಳು ನಾಪತ್ತೆಯಾಗಿರುವುದರ ಬಗ್ಗೆ**

4381 (5063) : ಶ್ರೀ ಆರ್. ಅಶೋಕ್ (ಉತ್ತರಹಳ್ಳಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಡತಗಳು ನಾಪತ್ತೆಯಾಗಿರುವುದು ನಿಜವೇ

ಆ) ಯಾವ ಕಾಮಗಾರಿಗೆ ಸಂಬಂಧಪಟ್ಟ ಎಷ್ಟು ಕಡತಗಳು ನಾಪತ್ತೆಯಾಗಿವೆ (ವಿವರ ನೀಡುವುದು):

ಇ) ಕಡತಗಳ ನಾಪತ್ತೆಗೆ ಸಂಬಂಧಪಟ್ಟಂತೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ, ಅವರ ಮೇಲೆ ಕೈಗೊಂಡಿರುವ ಕ್ರಮಗಳೇನು.

ಈ) ಈ ಕಡತಗಳಲ್ಲಿ ತಿಳಿಸಲಾದ ಕಾಮಗಾರಿಗಳಿಗೆ ಪಾಲಿಕೆ ಒಪ್ಪಿಗೆ ನೀಡಿದೆಯೇ?

ಉ) ನಾಪತ್ತೆಯಾಗಿರುವ ಕಡತಗಳ ಪತ್ತೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಗಳು):

ಅ) ಪ್ರಸಕ್ತ ಸಾಲಿನಲ್ಲಿ ಯಾವುದೇ ಕಡತ ನಾಪತ್ತೆಯಾಗಿರುವುದು ಕಂಡುಬಂದಿಲ್ಲ.

ಆ) ಇ) ಈ) ಮತ್ತು ಉ) ಉದ್ಭವಿಸುವುದಿಲ್ಲ.

**ಬೆಂಗಳೂರು ನೀರು ಸರಬರಾಜು ಮಂಡಳಿಯವರು ನೀರು ದರ ಪರಿಷ್ಕರಣೆ ಮಾಡಿರುವ ವಿವರಗಳನ್ನು ಒದಗಿಸುವ ಬಗ್ಗೆ**

4382 (5064) : ಶ್ರೀ ಅಶೋಕ್ ಆರ್. (ಉತ್ತರಹಳ್ಳಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಳೆದ 3 ವರ್ಷಗಳಲ್ಲಿ ಬೆಂಗಳೂರು ನೀರು ಸರಬರಾಜು ಮಂಡಳಿಯವರು ಎಷ್ಟು ಬಾರಿ ನೀರು ದರ ಪರಿಷ್ಕರಿಸಿರುತ್ತಾರೆ. ವರ್ಷವಾರು ವಿವರ ನೀಡುವುದು: